ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಬೀದರ್-ಬೆಂಗಳೂರು ನೇರ ಬಸ್ ಸಂಚಾರಕ್ಕೆ ಅವಕಾಶ ಕಲ್ಪಿಸುವ ಬಗ್ಗೆ

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-

332 (404) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ನಿಂದ ಹೈದರಾಬಾದ್ ಮಾರ್ಗವಾಗಿ ಬೆಂಗಳೂರಿಗೆ ಒಟ್ಟು ಎಷ್ಟು ಬಸ್ಸುಗಳು ಸಂಚರಿಸುತ್ತಿವೆ ; (ಬಸ್ಸುಗಳ ವಿವರ ನೀಡುವುದು)

(ಆ) ಬೀದರ್ ನಿಂದ ಬೆಂಗಳೂರಿಗೆ (ಹೈದರಾಬಾದ್ ನಗರದ ಬಸ್ ನಿಲ್ದಾಣಕ್ಕೆ ಹೋಗದೆ) ನೇರವಾಗಿ ಹೈದರಾಬಾದ್ ರಿಂಗ್ ರಸ್ತೆಯ ಮೂಲಕವೇ ಹೋಗಲು ಹೊಸದಾಗಿ ಎ.ಸಿ. ಸ್ಲೀಪರ್ ಕೋಚ್ ಬಸ್ ಓಡಿಸಿದಲ್ಲಿ ಬೀದರ್ ಜನರಿಗೆ ಬೆಂಗಳೂರಿಗೆ ಸರಿಯಾದ ಸಮಯಕ್ಕೆ ಹೋಗಲು ಮತ್ತು ಬರಲು ಅನುಕೂಲವಾಗುತ್ತದೆ ಈ ಅನುಕೂಲ ಮಾಡಿಕೊಡಲು ಸರ್ಕಾರವು ಯಾವ ಕ್ರಮ ಕೈಗೊಳ್ಳುವುದು ? (ಮಾಹಿತಿ ನೀಡುವುದು)